ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಗುರುವಾರ, ದಿನಾಂಕ: 18ನೇ ಜುಲೈ, 2019

ಬೆಂಗಳೂರು ಮಹಾನಗರದಲ್ಲಿನ ಅಪಾಯಕಾರಿ ಬೀದಿ ದೀಪ ಕಂಬಗಳ ಕುರಿತು

ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :-

339 (539) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಮಹಾನಗರದಲ್ಲಿರುವ ಬೀದಿ ದೀಪಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಸುಸ್ಥಿತಿಯಲ್ಲಿರುವ ಮತ್ತು ದುರಸ್ಥಿಯಲ್ಲಿರುವ ಕಂಬಗಳ ಸಂಖ್ಯೆ ಎಷ್ಟು ; (ವಲಯವಾರು ಮಾಹಿತಿ ನೀಡುವುದು)

(ಆ) ಅತೀ ಅಪಾಯಕಾರಿ ಸ್ಥಿತಿಯಲ್ಲಿರುವ ಕಂಬಗಳ ಸಂಖ್ಯೆ ಎಷ್ಟು ; ಇವುಗಳನ್ನು ದುರಸ್ಥಿಗೊಳಿಸಲಾಗಿದೆಯೇ ; (ಮಾಹಿತಿ ನೀಡುವುದು)

(ಇ) ಕಳೆದ 05 ವರ್ಷಗಳಲ್ಲಿ ನಗರದಲ್ಲಿ ವಿದ್ಯುತ್ ಅವಘಡಗಳಿಂದ ಸಂಭವಿಸಿರುವ ಅನಾಹುತಗಳ ಸಂಖ್ಯೆ ಎಷ್ಟು ; ಅಂತ ಪ್ರಕರಣಗಳಲ್ಲಿ ನೀಡಲಾದ ಪರಿಹಾರ ಕ್ರಮಗಳೇನು ; (ವಲಯವಾರು ಮಾಹಿತಿ ನೀಡುವುದು)

(ಈ) ವಿದ್ಯುತ್ ಅವಘಡಗಳು ಸಂಭವಿಸಿದ ಮೇಲೆಯೂ ನಗರದಲ್ಲಿರುವ ಅಪಾಯಕಾರಿ ಸ್ಥಿತಿಯಲ್ಲಿರುವ ಬೀದಿ ದೀಪಗಳ ಕಂಬಗಳನ್ನು ಪತ್ತೆ ಮಾಡಿ ದುರಸ್ಥಿಗೊಳಿಸಿ ಯಾವುದೇ ಅನಾಹುತ ಸಂಭವಿಸದಂತಾಗಲು ಸರ್ಕಾರ ತೆಗೆದುಕೊಂಡಿರುವ ಮುಂಜಾಗ್ರತಾ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)